## ಕರ್ನಾಟಕ ವಿಧಾನ ಪರಿಷತ್ತು.

**1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 164
**2. ಸದಸ್ಯರ ಹೆಸರು** : ಎನ್.ರವಿಕುಮಾರ್.
**3. ಉತ್ತರಿಸುವ ದಿನಾಂಕ** : 14.12.2021
**4. ಉತ್ತರಿಸುವ ಸಚಿವರು** : ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಸಕ್ಕರೆ ಕಾರ್ಖಾನೆಗಳು ಕಬ್ಬು ಬೆಳೆಯುವ ರೈತರಿಗೆ ನೀಡಬೇಕಾದ ಬಾಕಿ ಮೊತ್ತ ಎಷ್ಟು;<br>(ಕಾರ್ಖಾನೆವಾರು ವಿವರ ನೀಡುವುದು) | ರಾಜ್ಯದ ಸಕ್ಕರೆ ಕಾರ್ಖಾನೆಗಳಿಂದ 2016-17, 2017-18 ಮತ್ತು 2020-21ನೇ ಹಂಗಾಮುಗಳಲ್ಲಿನ ಕಬ್ಬು ಬಿಲ್ಲು ಬಾಕಿಯನ್ನು ರೈತರಿಗೆ ಪೂರ್ಣವಾಗಿ ಪಾವತಿಸಲಾಗಿರುತ್ತದೆ. ಉಳಿದಂತೆ, 2015-16, 2018-19 ಮತ್ತು 2019-20ನೇ ಹಂಗಾಮುಗಳಲ್ಲಿ ಕಾರ್ಯನಿರ್ವಹಿಸಿರುವ ಸಕ್ಕರೆ ಕಾರ್ಖಾನೆಗಳು ಕಬ್ಬು ಬೆಳೆಯುವ ರೈತರಿಗೆ ಪಾವತಿಸಲು ಬಾಕಿ ಉಳಿಸಿಕೊಂಡಿರುವ ಕಾರ್ಖಾನೆವಾರು ವಿವರಗಳನ್ನು **ಅನುಬಂಧ-1** ರಲ್ಲಿ ಒದಗಿಸಿದೆ. |
| (ಆ) | ರಾಜ್ಯದ ಸಕ್ಕರೆ ಕಾರ್ಖಾನೆಗಳು ಒಂದು ಟನ್ ಕಬ್ಬಿಗೆ ನೀಡುವ ದರ ಎಷ್ಟು; ಸರ್ಕಾರವು ರೈತರಿಗೆ ನೀಡುವ ದರ ಎಷ್ಟು; | ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 3(4)2020-ಎಸ್‌ಪಿ I, ದಿನಾಂಕ: 31.08.2021ರಲ್ಲಿ 2021-22ನೇ ಸಕ್ಕರೆ ಹಂಗಾಮಿಗೆ ಈ ಕೆಳಗಿನಂತೆ ನ್ಯಾಯಯುತ ಮತ್ತು ಲಾಭದಾಯಕ ಬೆಲೆಯನ್ನು (ಎಫ್.ಆರ್.ಪಿ) ನಿಗದಿಗೊಳಿಸಿದೆ.<br>1. ಶೇಕಡ 10.00 ರಷ್ಟು ಸಕ್ಕರೆ ಇಳುವರಿಗೆ ಪ್ರತಿ ಮೆ.ಟನ್ ಕಬ್ಬಿಗೆ ರೂ. 2900.00<br>2. ಶೇಕಡ 10.00ಕ್ಕೆ ಮೇಲ್ಪಟ್ಟು ಇಳುವರಿಯ ನಂತರದ ಶೇಕಡಾ 0.1 ರಷ್ಟು ಇಳುವರಿಗೆ ಪ್ರತಿ ಕ್ವಿಂಟಾಲ್ ಕಬ್ಬಿಗೆ ರೂ.2.90 ರಂತೆ ಹೆಚ್ಚುವರಿ ಬೆಲೆ.<br>3. ಶೇ.10.00ಕ್ಕಿಂತ ಕಡಿಮೆ ಹಾಗೂ ಶೇಕಡ 9.5ಕ್ಕೆ ಮೇಲ್ಪಟ್ಟು ಇಳುವರಿ ಹೊಂದಿರುವ ಸಕ್ಕರೆ ಕಾರ್ಖಾನೆಗಳಿಗೆ ಶೇಕಡ 0.1ರಷ್ಟು ಇಳುವರಿಗೆ ಪ್ರತಿ ಕ್ವಿಂಟಾಲ್‌ಗೆ ರೂ.2.90ರ ಸರಾಸರಿಯಂತೆ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು ಕಡಿಮೆ ಮಾಡುವುದು.<br>4. ಶೇಕಡ 9.5ಕ್ಕಿಂತ ಕಡಿಮೆ ಇಳುವರಿ ಹೊಂದಿರುವ ಕಾರ್ಖಾನೆಗಳಿಗೆ ಪ್ರತಿ ಮೆಟ್ರಿಕ್ ಟನ್‌ಗೆ ರೂ. 2788.00ಗಳ ನ್ಯಾಯಯುತ ಮತ್ತು ಲಾಭದಾಯಕ ಬೆಲೆ.<br>ಮೇಲ್ಕಂಡಂತೆ ಕೇಂದ್ರ ಸರ್ಕಾರವು 2021-22ನೇ ಸಕ್ಕರೆ ಹಂಗಾಮಿಗೆ ನಿಗದಿಪಡಿಸಿರುವ ಎಫ್.ಆರ್.ಪಿ ಆಧಾರದ ಮೇಲೆ ಕರ್ನಾಟಕ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) ಅಧಿನಿಯಮ 2013 ಮತ್ತು ತಿದ್ದುಪಡಿ ಅಧಿನಿಯಮ 2014ರ ಕಲಂ 2(ii) (ಇಎ) ಮತ್ತು 9(1) ರನ್ವಯ ಕಾರ್ಖಾನೆವಾರು ನ್ಯಾಯಯುತ ಮತ್ತು ಲಾಭದಾಯಕ ಬೆಲೆಯನ್ನು ಘೋಷಿಸಿ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ದಿನಾಂಕ:29.10.2021ರ ಆದೇಶದಲ್ಲಿ ಅಧಿಕೃತವಾಗಿ ಪ್ರಕಟಿಸಲಾಗಿದೆ. ಆದೇಶದ ಪ್ರತಿಯನ್ನು **ಅನುಬಂಧ-2** ರಲ್ಲಿ ಒದಗಿಸಿದೆ. |

.....2

| | | |
|---|---|---|
| (ಇ) | ಸರ್ಕಾರವು ಕಬ್ಬಿಗೆ ನಿಗದಿಪಡಿಸಿದ ಬೆಂಬಲ ಬೆಲೆ ಎಷ್ಟು? | ಪ್ರಸ್ತುತ ಕಬ್ಬಿಗೆ ಬೆಂಬಲ ಬೆಲೆ (ಎಂಎಸ್‌ಪಿ) ಘೋಷಿಸುವ ಪದ್ಧತಿ ಇರುವುದಿಲ್ಲ. ಆದರೆ ಕೇಂದ್ರ ಸರ್ಕಾರವು ಪ್ರತಿ ಸಕ್ಕರೆ ಹಂಗಾಮು ಪ್ರಾರಂಭವಾಗುವ ಮೊದಲೇ ಕಬ್ಬಿಗೆ ಮೊದಲ ಕಂತಿನ ರೂಪದಲ್ಲಿ ನ್ಯಾಯಯುತ ಮತ್ತು ಲಾಭದಾಯಕ ಬೆಲೆಯನ್ನು (ಎಫ್.ಆರ್.ಪಿ) ಘೋಷಿಸುತ್ತದೆ. ಇದರ ಆಧಾರದ ಮೇಲೆ ಸಕ್ಕರೆ ಕಾರ್ಖಾನೆಗಳ ಹಿಂದಿನ ಹಂಗಾಮಿನ ಸಕ್ಕರೆ ಇಳುವರಿಯನ್ನು ಆಧರಿಸಿ ಪ್ರತಿ ಮೆಟ್ರಿಕ್ ಟನ್ ಕಬ್ಬಿಗೆ ರೈತರಿಗೆ ಪಾವತಿಸಬೇಕಾದ ಎಫ್.ಆರ್.ಪಿ. ದರವನ್ನು ನಿಗದಿಗೊಳಿಸಿ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದಿಂದ ಆದೇಶ ಹೊರಡಿಸಲಾಗುತ್ತಿದೆ. ಪ್ರಸ್ತುತ ಮೊದಲ ಕಂತಿನ ದರವನ್ನು ಪಾವತಿಸುವಂತೆ ಎಲ್ಲಾ ಸಕ್ಕರೆ ಕಾರ್ಖಾನೆಗಳಿಗೆ ಸೂಚನೆಯನ್ನು ನೀಡಲಾಗಿರುತ್ತದೆ. |

ಸಿಐ 347 ಸಿಓಎಫ್ 2021

(ಶಂಕರ ಬ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು